## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ:ಗ್ರಾಅಪ 893 ಗ್ರಾಪಂಅ 2016, ಬೆಂಗಳೂರು, ದಿನಾಂಕ: 22-03-2017.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ 311 ಅನ್ನು ಪ್ರಕರಣದೊಡನೆ 209ನೇ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಮತ್ತಷ್ಟು ತಿದ್ದುಪಡಿ ಮಾಡಲು ಉದ್ದೇಶಿಸಿರುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 1996ರ ಕರಡನ್ನು ಸದರಿ ಅಧಿನಿಯಮದ 311ನೇ ಪ್ರಕರಣದ ಮೂಲಕ ಅಗತ್ಯಪಡಿಸಲಾದಂತೆ, ಇದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು, ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುತ್ತದೆಂದೂ ಈ ಮೂಲಕ ಸೂಚನೆಯನ್ನು ನೀಡಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು, ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು-01 ಇವರಿಗೆ ಕಳುಹಿಸಲು ಕೋರಲಾಗಿದೆ.

#### ಕರಡು ನಿಯಮಗಳು

**1. ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ನಿಯಮಗಳು 2017 ಎಂದು ಕರೆಯತಕ್ಕದ್ದು.

(2)ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 1ರ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು, 1996 ರ (ಇಲ್ಲಿ ಇನ್ನು ಮುಂದೆ ಮೂಲ ನಿಯಮಗಳೆಂದು ಉಲ್ಲೇಖಿತವಾಗಿದೆ) ರ ನಿಯಮ 1 ರ, ಖಂಡ (1) ರಲ್ಲಿ "ಕರ್ನಾಟಕ ಪಂಚಾಯತ್ ರಾಜ್" ಎಂಬ ಪದಗಳಿಗೆ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**3. ನಿಯಮ 2ರ ತಿದ್ದುಪಡಿ.- ಮೂಲ ನಿಯಮಗಳ, ನಿಯಮ 2ರಲ್ಲಿ, ಖಂಡ (1) ಕ್ಕೆ ಈ ಕೆಳಕಂಡಂತೆ ಪ್ರತಿಯೋಜಿಸತಕ್ಕದ್ದು, ಅಂದರೆ:-**

"(1)" ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993" (1993 ರ ಕರ್ನಾಟಕ ಅಧಿನಿಯಮ 14)

**4. ನಿಯಮ 5ರ ತಿದ್ದುಪಡಿ:-** ಮೂಲ ನಿಯಮಗಳ, ನಿಯಮ 5 ರಲ್ಲಿ "ತಾಲ್ಲೂಕು ಪಂಚಾಯತಿಯ" ಎಂಬ ಪದಗಳ ಬದಲಾಗಿ "ಸರ್ಕಾರದ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**PR-930**

**SC100**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
**ಟಿ.ವಿ. ಅರುಣ್‌ಕುಮಾರ್,**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ : ಗ್ರಾಅಪ 151 ಗ್ರಾಪಂಅ 2016, ಬೆಂಗಳೂರು, ದಿನಾಂಕ: 15-03-2017.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 3ಬಿ ಯೊಡನೆ ಓದಿಕೊಂಡಂತೆ ಪ್ರಕರಣ 311 ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ಜನ ವಸತಿ ಸಭೆ ಕರೆಯುವ ಮತ್ತು ನಡೆಸುವ) ನಿಯಮಗಳು, 2016ರ ಕರಡನ್ನು ಇದರಿಂದ ಭಾದಿತರಾಗುವ ವ್ಯಕ್ತಿಗಳ ಮಾಹಿತಿಗಾಗಿ ಸದರಿ ಅಧಿನಿಯಮದ ಪ್ರಕರಣ 311ರಲ್ಲಿ ನಿಗಧಿಪಡಿಸಿದಂತೆ ಪ್ರಕಟಿಸಲಾಗಿದೆ ಮತ್ತು ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ಸದರಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕಳುಹಿಸಲು ಈ ಮೂಲಕ ಸೂಚಿಸಲಾಗಿದೆ.

ಸದರಿ ನಿಯಮಗಳಿಗೆ ಸ್ವೀಕೃತವಾದ ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರವು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ಮೂವತ್ತು ದಿನಗಳ ನಂತರ ಪರಿಗಣಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ. ಆಕ್ಷೇಪಣೆ ಅಥವಾ ಸಲಹೆಗಳನ್ನು ಪ್ರಧಾನ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಹಂತ, 3ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು-01 ಇವರಿಗೆ ಕಳುಹಿಸಲು ಕೋರಲಾಗಿದೆ.

#### ಕರಡು ನಿಯಮಗಳು

1. **ಹೆಸರು ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜನವಸತಿ ಸಭೆಗಳನ್ನು ಕರೆಯುವ ಮತ್ತು ನಡೆಸುವ) ನಿಯಮಗಳು, 2017 ಎಂದು ಕರೆಯತಕ್ಕದ್ದು.

(2)ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರುತಕ್ಕದ್ದು.

**2. ಪರಿಭಾಷೆಗಳು:**– ಈ ನಿಯಮಗಳಲ್ಲಿ ವಿಷಯಕ್ಕೆ ಅಥವಾ ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯ ಇರದಿದ್ದರೆ:–

(a)"ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ

(1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14);

(b)"ಸಮಾವೇಶಕ" ಎಂದರೆ ವಾರ್ಡ್‌ಗೆ ಚುನಾಯಿತರಾದ, ಜನವಸತಿ ಪ್ರದೇಶದಲ್ಲಿರುವ ಸದಸ್ಯನು ಅಥವಾ ಅಂಥ ವ್ಯಕ್ತಿಯು ಸಭೆಯನ್ನು ಕರೆಯಲು ಮತ್ತು ಸಭೆಯ ಅಧ್ಯಕ್ಷತೆಯನ್ನು ವಹಿಸಲು ತಪ್ಪಿದರೆ, ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಥವಾ ಸಂಧರ್ಭಾನುಸಾರ ಕಾರ್ಯದರ್ಶಿ ಇವರನ್ನು ಒಳಗೊಳ್ಳುತ್ತದೆ.

(c)"ಪ್ರಕರಣ" ಎಂದರೆ ಅಧಿನಿಯಮದ ಪ್ರಕರಣ,

**3. ಜನವಸತಿ ಸಭೆಗಳನ್ನು ಕರೆಯುವ ಕಾರ್ಯವಿಧಾನ:**–ಸಮಾವೇಶಕನು ಜನವಸತಿ ಸಭೆಯನ್ನು ತಾನು ನಿರ್ಧರಿಸಬಹುದಾದಂಥ ದಿನಾಂಕದಂದು ಮತ್ತು ಸಮಯದಲ್ಲಿ ಜನವಸತಿ ವ್ಯಾಪ್ತಿಯಲ್ಲಿರುವ ಸ್ಥಳದಲ್ಲಿ ತನ್ನ ಕಾರ್ಯಕಲಾಪಗಳನ್ನು ನಡೆಸುವುದಕ್ಕಾಗಿ ಕೊನೆಯ ಪಕ್ಷ 6 ತಿಂಗಳಿಗೊಮ್ಮೆ ಜನವಸತಿ ಸಭೆಯನ್ನು ಕರೆಯತಕ್ಕದ್ದು.

**4. ಜನವಸತಿ ಸಭೆಯ ಮತ್ತು ವ್ಯವಹಾರದ ಸಾರ್ವಜನಿಕ ಸೂಚನೆ:**– ಸಮಾವೇಶಕನು ಗ್ರಾಮ ಪಂಚಾಯತಿ ಕಾರ್ಯದರ್ಶಿಯ ಸಹಾಯದೊಂದಿಗೆ ಜನವಸತಿ ಸಭೆಯ ಸಾಮಾನ್ಯ ಅಥವಾ ವಿಶೇಷ ಸಭೆಯ ಸಾರ್ವಜನಿಕ ಸೂಚನೆಯನ್ನು ಸದರಿ ಸಭೆಯ ದಿನಾಂಕದಿಂದ ಕನಿಷ್ಟ ಒಂದು ವಾರ ಮುಂಚಿತವಾಗಿ ಕರಪತ್ರಗಳು ಅಥವಾ ಟಾಂ ಟಾಂ ಮಾಡುವ ಮೂಲಕ ಅಥವಾ ಸ್ವತ: ನೋಟೀಸನ್ನು ವೈಯಕ್ತಿಕವಾಗಿ ಜನವಸತಿ ಸಭೆಯ ಸದಸ್ಯರಿಗೆ ತಲುಪಿಸಲು ಕ್ರಮ ತೆಗೆದುಕೊಳ್ಳುವ ಮೂಲಕ ಅಂತಹ ಸಭೆ ನಡೆಯುವ ಸ್ಥಳ ಮತ್ತು ನಿರ್ಧಿಷ್ಟಪಡಿಸುವ ಸಾರ್ವಜನಿಕ ಸೂಚನೆಯನ್ನು ಹೊರಡಿಸತಕ್ಕದ್ದು. ಜನವಸತಿ ಸಭೆಗೆ ಸಂಬಂಧಿಸಿದ ಗ್ರಾಮ ವೆಚ್ಚವನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿ ನಿಧಿಯಿಂದ ಭರಿಸತಕ್ಕದ್ದು.

**5. ನಡವಳಿಗಳ ದಾಖಲೆ:**– ಜನವಸತಿ ಸಭೆಯ ನಡವಳಿಗಳು ಕನ್ನಡಹಲ್ಲಿರತಕ್ಕದ್ದು ಮತ್ತು ಅದನ್ನು ಪಂಚಾಯತ್ ಕಾರ್ಯದರ್ಶಿಯು ಅಥವಾ ಅಧ್ಯಕ್ಷನು ಸೂಚಿಸುವ ಇನ್ನಿತರ ಅಧಿಕಾರಿಯು ಅದೇ ಕಾರಣಕ್ಕಾಗಿ ಒದಗಿಸಲಾದ ಪುಸ್ತಕದಲ್ಲಿ ದಾಖಲಿಸಿ ಇಡತಕ್ಕದ್ದು. ಜನ ವಸತಿ ಸಭೆಯ ಅಭಿಪ್ರಾಯ ಶಿಫಾರಸ್ಸು ಅಥವಾ ಸಲಹೆಗಳನ್ನು ನಡವಳಿ ಪುಸ್ತಕದಲ್ಲಿ ದಾಖಲಿಸಿ ಅದರ ಪ್ರತಿಯನ್ನು ವಾರ್ಡ್ ಸಭೆಗೆ ಮತ್ತು ಗ್ರಾಮ ಸಭೆಗೆ ಕಳುಹಿಸತಕ್ಕದ್ದು.

**6. ಜನವಸತಿ ಸಭೆಯ ನಿರ್ಣಯ:**– (1)ಜನವಸತಿ ಸಭೆಯಲ್ಲಿ ತೆಗೆದುಕೊಳ್ಳಬೇಕಾದ ವಿಷಯಗಳ ವಿಷಯ ಸೂಚಿಯನ್ನು ಮೊದಲೇ ಸದಸ್ಯರಿಗೆ ನೀಡತಕ್ಕದ್ದು. ಇನ್ನಾವುದಾದರೂ ತುರ್ತು ವಿಷಯಗಳನ್ನು ತೆಗೆದು ಕೊಳ್ಳಬೇಕಾದ ಅವಶ್ಯಕತೆಯಿದ್ದಲ್ಲಿ ಅಂತಹ ವಿಷಯಗಳ ಬಗೆಗೆ ಮಾಹಿತಿಯನ್ನು ಸಭೆಯು ನಡೆಯುವ ಮೊದಲು ಸದಸ್ಯರು ಸಮಾವೇಶಕನಿಗೆ ನೀಡತಕ್ಕದ್ದು.

(2)ಜನವಸತಿ ಸಭೆಯಲ್ಲಿ ಯಾವುದೇ ವಿಷಯಕ್ಕೆ ಸಂಬಂಧಪಟ್ಟಂತೆ ನಿರ್ಣಯಗಳನ್ನು, ಹಾಜರಿದ್ದು ಮತ ಚಲಾಯಿಸುವ ಸದಸ್ಯರ ಬಹುಮತದಿಂದ ಅಂಗೀಕರಿಸತಕ್ಕದ್ದು.

**7. ಜನವಸತಿ ಸಭೆಯಲ್ಲಿ ಹಾಜರಿರಬೇಕಾದ ಅಧಿಕಾರಿಗಳು ಉಪಸ್ಥಿತಿ:**–ಪ್ರತಿ ಜನವಸತಿ ಸಭೆಯಲ್ಲಿ ಈ ಕೆಳಕಂಡ ಅಧಿಕಾರಿಗಳು ಹಾಜರಿರತಕ್ಕದ್ದು.

1. ಸಂಬಂಧಿಸಿದ ಕಾರ್ಯಕ್ಷೇತ್ರದ ಅಂಗನವಾಡಿ ಕಾರ್ಯಕರ್ತರು;
2. ಸಂಬಂಧಿಸಿದ ಕಾರ್ಯಕ್ಷೇತ್ರದ ಆಶಾ ಕಾರ್ಯಕರ್ತೆಯರು;
3. ಸಂಬಂಧಿಸಿದ ಕಾರ್ಯಕ್ಷೇತ್ರದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ;
4. ಸಂಬಂಧಿಸಿದ ಕಾರ್ಯಕ್ಷೇತ್ರದ ಗ್ರಾಮ ಲೆಕ್ಕಿಗ;
5. ಸಂಬಂಧಿಸಿದ ಕಾರ್ಯಕ್ಷೇತ್ರದ ಕೃಷಿ ಸಹಾಯಕರು;
6. ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದ ಸಂಬಂಧಪಟ್ಟ ಅಭಿಯಂತರರು; ಮತ್ತು
7. ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದ ಕುಡಿಯುವ ನೀರಿನ ಯೋಜನೆಯ ಸಂಬಂಧಪಟ್ಟ ಅಭಿಯಂತರರು;

**PR-931**

**SC100**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
**ಟಿ.ವಿ. ಅರುಣ್‌ಕುಮಾರ್,**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

## ಕಂದಾಯ ಸಚಿವಾಲಯ

## ತಿದ್ದುಪಡಿ ಆದೇಶ

**ಸಂಖ್ಯೆ: ಆರ್‌ಡಿ 25 ಎಲ್‌ಜಿಎಂ 2017, ಬೆಂಗಳೂರು, ದಿನಾಂಕ: 18–04–2017.**

ಚಾಮರಾಜನಗರ ಜಿಲ್ಲೆಯ ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಆರ್‌ಡಿ 153 ಎಲ್‌ಜಿಎಂ 2013, ದಿನಾಂಕ: 30.01.2014 ರಲ್ಲಿ ರಚಿಸಿದ್ದು, ಸದರಿ ಅಧಿಸೂಚನೆಯ ಕ್ರಮ ಸಂಖ್ಯೆ 4 ರಲ್ಲಿರುವ ಶ್ರೀಮತಿ ಎಂ. ಸುಮತಿ ಕೋಂ ಎಂ. ಮಲ್ಲೇಗೌಡ, ಮುತ್ತಿಗೆ ಗ್ರಾಮ, ಹೆಗ್ಗೂಠಾರ ಅಂಚೆ, ಕಸಬಾ ಹೋಬಳಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ (ಸದಸ್ಯರು ಮಹಿಳೆ) ಇವರ ನಾಮನಿರ್ದೇಶನವನ್ನು ಹಿಂಪಡೆದು ಅವರ ಸ್ಥಳದಲ್ಲಿ ಶ್ರೀಮತಿ ಶಾಂತಲಾ ಕೋಂ ಸಿ.ಎಸ್. ನಾಗೇಂದ್ರ ಪ್ರಸಾದ್,